11 16/1/21 149

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಶಿವಕುಮಾರ ಕೆ (ನಾಮನಿರ್ದೇಶನ) ರವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಹೇಳಿಕೆ**

**-: ಸೂಚನೆ :-**

ಕರ್ನಾಟಕ ಭೂ ಕಂದಾಯ ಕಾಯ್ದೆಯಡಿ "ಖಾಸಗಿ ಭೂ ಮಾಪಕರ ಸೇವೆ" ಗೆ ಅವಕಾಶವಿದ್ದು, ಕಳೆದ ಹಲವು ದಶಕಗಳಿಂದ ಖಾಸಗಿ "ಭೂಮಾಪಕರು ಅಧಿಕೃತವಾಗಿ ಭೂದಾಖಲೆಗಳ ಹಾಗೂ ಭೂಮಾಪನ ಇಲಾಖೆ"ಯ ನಿಯಮಗಳಿಗುಣವಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ರಾಜ್ಯದ ಭೂದಾಖಲೆಗಳ ಹಾಗೂ ಭೂಮಾಪನ ಇಲಾಖೆಯಲ್ಲಿ ಖಾಲಿ ಇರುವ ಸರ್ಕಾರಿ ಭೂಮಾಪಕರ ಹುದ್ದೆಗಳನ್ನು "ಒಂದು ಬಾರಿಯ ವಿಶೇಷ ನೇಮಕಾತಿ" ಉಪಕ್ರಮದಲ್ಲಿ ಸೇವಾನುಭವದ ಆಧಾರದಲ್ಲಿ ಖಾಸಗಿ ಭೂಮಾಪಕರನ್ನು ಖಾಲಿ ಇರುವ ಭೂಮಾಪಕರ ಹುದ್ದೆಗಳಿಗೆ ಭರ್ತಿ ಮಾಡಲು ಕ್ರಮವಹಿಸುವುದರ ಮೂಲಕ ಪರವಾನಗಿ ಭೂಮಾಪಕರಿಗೆ ಮತ್ತು ಅವರ ಕುಟುಂಬ ವರ್ಗದವರಿಗೆ ಅನುಕೂಲ ಮಾಡುವುದರ ಮೂಲಕ ಸರ್ಕಾರದ ಮಂಚೂಣಿ ಕಾರ್ಯಕ್ರಮ (Government Flagship Programs) ಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬಹುದಾಗಿರುವುದರಿಂದ ಈ ಕುರಿತು ಶೀಘ್ರ ಕ್ರಮವಹಿಸುವ ಬಗ್ಗೆ ಮಾನ್ಯ ಕರ್ನಾಟಕ ಸರ್ಕಾರದ ಕಂದಾಯ ಮಂತ್ರಿಗಳನ್ನು ನಿಯಮ 72 ರಡಿಯಲ್ಲಿ ಗಮನ ಸೆಳೆಯಬಯಸುತ್ತೇನೆ.

**-: ಹೇಳಿಕೆ :-**

ಕರ್ನಾಟಕ ಭೂ ಕಂದಾಯ ಕಾಯ್ದೆಯಡಿ "ಖಾಸಗಿ ಭೂ ಮಾಪಕರ ಸೇವೆ" ಗೆ ಅವಕಾಶವಿದ್ದು, ಕಳೆದ ಹಲವು ದಶಕಗಳಿಂದ ಖಾಸಗಿ "ಭೂಮಾಪಕರು ಅಧಿಕೃತವಾಗಿ ಭೂದಾಖಲೆಗಳ ಹಾಗೂ ಭೂಮಾಪನ ಇಲಾಖೆ"ಯ ನಿಯಮಗಳಿಗುಣವಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ರಾಜ್ಯದ ಭೂದಾಖಲೆಗಳ ಹಾಗೂ ಭೂಮಾಪನ ಇಲಾಖೆಯಲ್ಲಿ ಖಾಲಿ ಇರುವ ಸರ್ಕಾರಿ ಭೂಮಾಪಕರ ಹುದ್ದೆಗಳನ್ನು "ಒಂದು ಬಾರಿಯ ವಿಶೇಷ ನೇಮಕಾತಿ" ಉಪಕ್ರಮದಲ್ಲಿ ಸೇವಾನುಭವದ ಆಧಾರದಲ್ಲಿ ಖಾಸಗಿ ಭೂಮಾಪಕರನ್ನು ಖಾಲಿ ಇರುವ ಭೂಮಾಪಕರ ಹುದ್ದೆಗಳಿಗೆ ಭರ್ತಿ ಮಾಡುವ ಸಂಬಂಧ ಇಲಾಖಾ ಮಟ್ಟದಲ್ಲಿ ಹಾಗೂ ಸಚಿವರ ಹಂತದಲ್ಲಿ ನಡೆದ ಸಭೆಯಲ್ಲಿ ಸೇವಾ ಭದ್ರತೆಯನ್ನು ಒದಗಿಸಲು ಅಥವಾ ಸೇವೆಯನ್ನು ಸರ್ಕಾರಿ ಕೆಲಸಕ್ಕೆ ಸಕ್ರಮಗೊಳಿಸಲು ನಿಯಮಗಳಲ್ಲಿ ಅವಕಾಶವಿಲ್ಲವೆಂದು ಅಭಿಪ್ರಾಯಿಸಿ, ಅಲ್ಲದೇ ಪರವಾನಗಿ ಭೂಮಾಪಕರು ಖಾಲಿ ಇರುವ ಮಂಜೂರಾದ ಹುದ್ದೆಗಳಲ್ಲಿ ಕೆಲಸ ನಿರ್ವಹಿಸಿರುವುದಿಲ್ಲವಾದ್ದರಿಂದ ಇವರುಗಳಿಗೆ ಸೇವೆಯಲ್ಲಿ ಸಕ್ರಮಗೊಳಿಸುವುದು, ವಯೋಮಿತಿ ಸಡಿಲಿಕೆ, ಸೇವಾ ಭದ್ರತೆ ನೀಡುವುದು, ಕನಿಷ್ಠ ವೇತನ ನಿಗದಿಪಡಿಸುವುದಕ್ಕಾಗಲಿ ಅವಕಾಶವಿಲ್ಲವೆಂದು ಹಾಗೂ ಮಾನ್ಯ ನ್ಯಾಯಾಲಯದ ವ್ಯಾಪ್ತಿಯಲ್ಲಿ ನಿರ್ಧರಿಸಿರುವ ಆದೇಶಗಳನ್ನು ಪ್ರಸ್ತಾಪಿಸಿ ಈ ವಿಷಯವು ಈಗಾಗಲೇ ಅತಿ ಸ್ಪಷ್ಟವಾಗಿದ್ದು, ಇದಕ್ಕೆ ವ್ಯತಿರಿಕ್ತವಾಗಿ ನಡೆಯಲು ಸಾಧ್ಯವಿರುವುದಿಲ್ಲ" ಎಂದು ತಿಳಿಸಲಾಗಿರುತ್ತದೆ.

Scanned with OKEN S...

ಪರವಾನಗಿ ಭೂಮಾಪಕರುಗಳನ್ನು ಖಾಯಂಗೊಳಿಸುವ ಕುರಿತು ಮಾನ್ಯ ಕೆ.ಎ.ಟಿಯಲ್ಲಿ ಅರ್ಜಿ ಸಂಖ್ಯೆ:3533/2017 ರಡಿಯಲ್ಲಿ ಅರ್ಜಿ ದಾಖಲಿಸಲಾಗಿರುತ್ತದೆ. ಈ ಸಂಬಂಧ ಮಾನ್ಯ ಅಡ್ವೊಕೇಟ್ ಜನರಲ್‌ರವರು ಪರವಾನಗಿ ಭೂಮಾಪಕರು ಸರ್ಕಾರಿ ಭೂಮಾಪಕರು ಅಲ್ಲವೆಂದು ಹಾಗೂ ಸರ್ಕಾರದಿಂದ ಈ ಬಗ್ಗೆ ಯಾವುದೇ ಭರವಸೆ ನೀಡಿರುವುದಿಲ್ಲ ಎಂದೂ, ಹಾಗೂ ಪರವಾನಗಿ ಭೂಮಾಪಕರು ad-hoc ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವುದಿಲ್ಲವೆಂದು ಹಾಗೂ ಇವರಿಗೆ ಸೇವಾ ನಿಯಮಗಳು ಅನ್ವಯವಾಗುವುದಿಲ್ಲವಾದ್ದರಿಂದ ಇವರುಗಳನ್ನು ನೇಮಕಾತಿಗೆ ಪರಿಗಣಿಸಲು ಸಾಧ್ಯವಿಲ್ಲವೆಂದು ತಿಳಿಸಿದ್ದರ ಮೇರೆಗೆ, ಸದರಿ ಪ್ರಕರಣವನ್ನು ಮಾನ್ಯ ನ್ಯಾಯಾಲಯವು ವಜಾಗೊಳಿಸಿ ಆದೇಶಿಸಿರುತ್ತದೆ.

ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ:ಕಂಇ 157 ಎಸ್‌ಎಸ್‌ಸಿ 2023, ದಿನಾಂಕ:08.11.2023ರ ಪತ್ರದಲ್ಲಿ ಪರವಾನಗಿ ಭೂಮಾಪಕರನ್ನು ಭೂಮಾಪನ ಇಲಾಖೆಯಲ್ಲಿ ವಿಲೀನಗೊಳಿಸುವ ಕುರಿತಂತೆ ಭೂಮಾಪನ ಇಲಾಖೆಯಲ್ಲಿ ಮಂಜೂರಾದ ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ದಿನಗೂಲಿ ಆಧಾರದ ಮೇಲೆ ನೇಮಕಗೊಂಡು 10 ವರ್ಷಗಳ ಕಾಲ ನಿರಂತರವಾಗಿ ಸೇವೆ ಸಲ್ಲಿಸಿ ಸರ್ಕಾರದಿಂದ ವೇತನ ಭತ್ಯೆಗಳನ್ನು ಪಡೆದಿದ್ದಲ್ಲಿ ಮಾತ್ರ ಸೇವೆಯಲ್ಲಿ ವಿಲೀನಗೊಳಿಸಲು ಅವಕಾಶವಿರುತ್ತದೆ. ಆದರೆ ಪರವಾನಗಿ ಭೂಮಾಪಕರನ್ನು ಯಾವುದೇ ಖಾಲಿ ಹುದ್ದೆಗೆ ನೇಮಕ ಮಾಡಿಕೊಂಡಿರುವುದಿಲ್ಲ. ಹಾಗೂ ಸಂಚಿತ ನಿಧಿಯಿಂದಾಗಲಿ ಅಥವಾ ಸರ್ಕಾರದ ಅನುದಾನದಿಂದಾಗಲಿ ಇವರಿಗೆ ವೇತನ ಪಾವತಿಸಿರುವುದಿಲ್ಲ. ಅರ್ಜಿದಾರರಿಂದ ಸ್ವೀಕೃತವಾಗುವ ಶುಲ್ಕದಲ್ಲಿ ಕಾಲಕಾಲಕ್ಕೆ ನಿಗಧಿಪಡಿಸಿದ ಮೊತ್ತವನ್ನು ಪಾವತಿಸಲಾಗುತ್ತಿದೆ. ಪರವಾನಗಿ ನೀಡುವಾಗ ಇದು ಯಾವುದೇ ಸರ್ಕಾರಿ ಸೇವೆಗೆ ಪೂರಕವಲ್ಲವೆಂದು ಸ್ಪಷ್ಟಪಡಿಸಲಾಗಿದೆ. ಅಲ್ಲದೆ ಶ್ರೀಮತಿ ಉಮಾದೇವಿ ಪ್ರಕರಣದನ್ವಯ ಪರವಾನಗಿ ಭೂಮಾಪಕರನ್ನು ಸಕ್ರಮಗೊಳಿಸಲು ಅವಕಾಶವಿರುವುದಿಲ್ಲವೆಂದು ಸ್ಪಷ್ಟಪಡಿಸಿ ಹಿಂಬರಹ ನೀಡಲು ನಿರ್ದೇಶಿಸಲಾಗಿದೆ.

ಮೇಲಿನಂತೆ, ಪರವಾನಗಿ ಭೂಮಾಪಕರನ್ನು ಯಾವುದೇ ಖಾಲಿ ಹುದ್ದೆಗೆ ನೇಮಕ ಮಾಡಿಕೊಂಡಿರುವುದಿಲ್ಲ ಹಾಗೂ ಸಂಚಿತ ನಿಧಿಯಿಂದಾಗಲಿ, ಸರ್ಕಾರದ ಅನುದಾನದಿಂದಾಗಲಿ ಇವರಿಗೆ ವೇತನ ಪಾವತಿಸಿರುವುದಿಲ್ಲವಾದ್ದರಿಂದ ಖಾಸಗಿ ಭೂಮಾಪಕರನ್ನು ಖಾಲಿ ಇರುವ ಭೂಮಾಪಕರ ಹುದ್ದೆಗಳಿಗೆ ಭರ್ತಿ ಮಾಡಲು ಅವಕಾಶವಿರುವುದಿಲ್ಲ.

**<u>ಸಂಖ್ಯೆ: ಕಂಇ 227 ಎಸ್‌ಎಸ್‌ಸಿ 2025</u>**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು

Scanned with OKEN Scanner